ಕರ್ನಾಟಕ ವಿಧಾನ ಸಭೆ

KARNATAKA LEGISLATIVE ASSEMBLY

ಶುಕ್ರವಾರ, ದಿನಾಂಕ ೧೩ನೇ ಫೆಬ್ರುವರಿ ೧೯೮೭, ಮಾಘ ೨೪, ೧೯೦೮ ಶಕ.

ವಿಧಾನ ಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ ಸದನವು ಬೆಳಿಗ್ಗೆ

೯ ಗಂಟೆ ಹದಿನೈದು ನಿಮಿಷಕ್ಕೆ ಸಮಾವೇಶಗೊಂಡಿತು

[ಮಾನ್ಯ ಅಧ್ಯಕ್ಷರು (ಶ್ರೀ ಬಿ. ಜಿ. ಬಣಕಾರ್) ಅವರು ಪೀಠವನ್ನು ಅಲಂಕರಿಸಿದರು]

ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮಂತ್ರಿ).— ಮಾನ್ಯ ಅಧ್ಯಕ್ಷರೇ, ಶ್ರೀ ಎಸ್. ಆರ್. ಬೊಮ್ಮಾಯಿ (ಕಂದಾಯ, ಯೋಜನೆ ಮತ್ತು ಕಾರ್ಮಿಕ ಮಂತ್ರಿ) ಅವರ ಪರವಾಗಿ ''೧೯೬೪ನೇ ಇಸವಿಯ ಕರ್ನಾಟಕ ಭೂ ಕಂದಾಯ ಶಾಸನದ ೯೪ನೇ (೨)ನೇ ಕಲಮಿನ ಮೇರೆ, ಶಿಕಾರಿಪುರ ಮತ್ತು ಹೊನ್ನಾಳಿ ತಾಲ್ಲೂಕಿನ ೭೨ ಗ್ರಾಮಗಳಿಗೆ ೧೯೮೪-೮೫ನೇ ಸಾಲಿನಲ್ಲಿ ತಿರಿಗೆ ಮನ್ನಾ ಮಾಡಿದ ಬಗ್ಗೆ ದಿನಾಂಕ ೧೩ನೇ ಜನವರಿ ೧೯೮೭ ರಂದು ಹೊರಡಿಸಲಾದ ಆರ್‌ಡಿ ೧೦ ಟಿಆರ್‌ಎಂ ೮೫ನೇ ಕ್ರಮಾಂಕದ ಅಧಿಸೂಚನೆಯನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು.—ಸಭೆಯ ಮುಂದಿಡಲಾಯಿತು.

ಶ್ರೀ ಆರ್. ಎಲ್. ಜಾಲಪ್ಪ (ಸಹಕಾರ ಮಂತ್ರಿ).— ಮಾನ್ಯ ಅಧ್ಯಕ್ಷರೇ, ನನ್ನ ಹೆಸರಿನ ಮುಂದೆ ಇರುವ ''೧೯೫೯ನೇ ಇಸವಿಯ ಕರ್ನಾಟಕ ಸಹಕಾರ ಸಂಘಗಳ ಕಾಯಿದೆಯ ೧೩೦ನೇ ಕಲಮಿನ ಮೇರೆಗೆ ೧೯೫೯ನೇ ಇಸವಿಯ ಕರ್ನಾಟಕ ಸಹಕಾರ ಸಂಘಗಳ ಶಾಸನದ ೭೬ ಎ ಕಲಂನ್ನು ಮಾರ್ಪಾಡಿನೊಂದಿಗೆ ಪ್ರಸಾಯ ಹಾಗೂ ಗ್ರಾಮೀಣಾಭಿವೃದ್ಧಿ ಬ್ಯಾಂಕುಗಳಿಗೆ ಅನ್ವಯಿಸುವುದರ ಬಗ್ಗೆ ದಿನಾಂಕ ೧೬ನೇ ಜನವರಿ ೧೯೮೬ ರಂದು ಹೊರಡಿಸಲಾದ ಸಿಎಂಡಬ್ಲ್ಯೂ ೩೧ ಸಿಎಲ್‌ಎಂ ೮೬ನೇ ಕ್ರಮಾಂಕದ ಆದೇಶವನ್ನು'' ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು.—ಸಭೆಯ ಮುಂದಿಡಲಾಯಿತು

ಶ್ರೀ ಜೆ ಎಸ್. ದೇಶಮುಖ್ (ಅರಣ್ಯ, ಗಣಿ ಮತ್ತು ಭೂ ವಿಜ್ಞಾನ ಮಂತ್ರಿ).— ಮಾನ್ಯ ಅಧ್ಯಕ್ಷರೇ, ನನ್ನ ಹೆಸರಿನ ಮುಂದೆ ಇರುವ ''೧೯೫೬ನೇ ಇಸವಿಯ ಕಂಪನಿಗಳ ಶಾಸನದ ೬೧೯ (ಎ) ಕಲಮಿನ ಮೇರೆಗೆ ಕರ್ನಾಟಕ ಗೇರು ಅಭಿವೃದ್ಧಿ ನಿಗಮದ ೧೯೮೫-೮೬ನೇ ಸಾಲಿನ ವಾರ್ಷಿಕ ವರದಿಯನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು.—ಸಭೆಯ ಮುಂದಿಡಲಾಯಿತು.

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮಂತ್ರಿ)—ಮಾನ್ಯ ಅಧ್ಯಕ್ಷರೇ, ಶ್ರೀ ಬಸವರಾಜ್ ಪಾಟೀಲ್ ಅನ್ವರಿ (ಕೃಷಿ ಮತ್ತು ತೋಟಗಾರಿಕೆ ರಾಜ್ಯ ಮಂತ್ರಿ).— ಅವರ ಪರವಾಗಿ ಇರುವ ''೧೯೬೩ನೇ ಇಸವಿಯ ಕೃಷಿ ವಿಶ್ವವಿದ್ಯಾನಿಲಯದ ೧೯೭೬-೭೭ನೇ ಸಾಲಿನಿಂದ ೧೯೮೮-೮೯ರ ವರೆಗಿನ ಲೆಕ್ಕಪತ್ರಗಳ ತನಿಖಾ ವರದಿಯನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು.—ಸಭೆಯ ಮುಂದಿಡಲಾಯಿತು.